ಸಂತೇಮಾರನಹಳ್ಳಿ ಕ್ಷೇತ್ರಕ್ಕೆ ಕುಡಿಯುವ ನೀರಿನ ಯೋಜನೆ.

833(1225) ಶ್ರೀ ಎ.ಆರ್. ಕೃಷ್ಣಮೂರ್ತಿ (ಸಂತೇಮಾರನಹಳ್ಳಿ) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕಾವೇರಿ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಯಿಂದ ಬಿಟ್ಟುಹೋಗಿರುವ ಕಾವುದವಾಡಿ ಬಸವಟ್ಟಿ, ಹೆಗ್ಗವಾಡಿಪುರ ಮತ್ತು ದೇಶವಳ್ಳಿ ಗ್ರಾಮಗಳಿಗೆ ಕಾವೇರಿ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಿ ಕೊಡುವುದಾಗಿ ಸದನದಲ್ಲಿ ನೀಡಿದ ಭರವಸೆಯನ್ನು ಅನುಷ್ಠಾನಗೊಳಿಸಲಾಗಿದೆಯೇ?

2) ಹಾಗಿದ್ದಲ್ಲಿ ಸದರಿ ಯೋಜನೆಯನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ? ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ಎಂ.ಎಸ್. ಪಾಟೀಲ್ (ನಗರಾಭಿವೃದ್ಧಿ ಸಚಿವರು) :—

1. ಸದನದಲ್ಲಿ ನೀಡಿದ ಭರವಸೆಯಂತೆ ಕಾವೇರಿ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಯಿಂದ ಬಿಟ್ಟು ಹೋಗಿರುವ ಕಾವುದವಾಡಿ, ಬಸವಟ್ಟಿ, ಹೆಗ್ಗವಾಡಿಪುರ ಮತ್ತು ದೇಶವಳ್ಳಿ ಗ್ರಾಮಗಳಿಗೆ, ಚಾಮರಾಜನಗರ ಪಟ್ಟಣ ಮತ್ತು ಮಾರ್ಗಮಧ್ಯದ 23 ಹಳ್ಳಿಗಳಿಗೆ ಮಂಜೂರಾಗಿರುವ ನೀರು ಸರಬರಾಜು ಯೋಜನೆಯಿಂದ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

2. ಈ ಯೋಜನೆಯನ್ನು ಸೆಪ್ಟೆಂಬರ್ 1999ಕ್ಕೆ ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳು.

835(374) ಶ್ರೀ ಕುಂಬ್ಳೆ ಸುಂದರ್‌ರಾವ್ (ಸುರತ್ಕಲ್) :— ಮಾನ್ಯ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಮೆಟ್ರಿಕ್‌ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು? ಅವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ಸದರಿ ಹಾಸ್ಟೆಲುಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಪಾಠವನ್ನು ಹೇಳಿಕೊಡಲು ನಿಯೋಜಿಸಿರುವ ನಿವೃತ್ತಿ ಅಧ್ಯಾಪಕರಿಗೆ ಕೊಡುವ ಗೌರವಧನ ಮಾಹೆಯಾನ 100.00 ರೂ.ಗಳಿದ್ದು ಅದು ತೀರಾ ಕಡಿಮೆ ಎಂಬ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ?